# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (393)
ಸದಸ್ಯರ ಹೆಸರು : ಶ್ರೀ ಕೆ.ಹರೀಶ ಕುಮಾರ್
ಉತ್ತರಿಸುವ ದಿನಾಂಕ : 23.09.2020
ಉತ್ತರಿಸುವ ಸಚಿವರು : ಉಪ ಮುಖ್ಯ ಮಂತ್ರಿಗಳು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 2019-20, 2020-21 ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಮಂಜೂರಾದ ಕೊಳವೆಬಾವಿಗಳ ಸಂಖ್ಯೆ ಎಷ್ಟು; ಈ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು; ಸದರಿ ಕೊಳವೆಬಾವಿಗಳಿಗೆ ಖರ್ಚಾಗಿರುವ ಮೊತ್ತ ಎಷ್ಟು; | ರಾಜ್ಯದಲ್ಲಿ 2019-20 ಮತ್ತು 2020-21ನೇ ಸಾಲಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆಬಾವಿಗಳ ಮತ್ತು ಫಲಾನುಭವಿಗಳ ವಿವರ ಈ ಕೆಳಗಿನಂತಿದೆ; (see table below) ಕೊಳವೆಬಾವಿಗಳನ್ನು ಕೊರೆಸಲು ಟೆಂಡರ್ ಆಹ್ವಾನಿಸಲು ಕ್ರಮವಹಿಸಲಾಗುತ್ತಿರುವುದರಿಂದ ಈ ಯೋಜನೆಯಡಿ ಖರ್ಚು ಆಗಿರುವುದಿಲ್ಲ. |
| ಆ) | ಇನ್ನೂ ವಿದ್ಯುತ್ ಸಂಪರ್ಕವನ್ನು ಕಲ್ಪಿಸದೇ ಇರುವ ಕೊಳವೆಬಾವಿಗಳ ಸಂಖ್ಯೆ ಎಷ್ಟು; ಯಾವಾಗ ಸಂಪರ್ಕ ಕಲ್ಪಿಸಲಾಗುವುದು. | ಇನ್ನೂ 10946 ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕಕಲ್ಪಿಸಬೇಕಾಗಿದೆ. ಈ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ವೈಎಂಡಿ/ಎಂಎಸ್‌ಡಿ ಮೊತ್ತವನ್ನು ಸಂಬಂಧಪಟ್ಟ ಎಸ್ಕಾಂ ಕಂಪನಿಗಳಿಗೆ ಪಾವತಿಸಿ ಎಸ್ಕಾಂಗಳಲ್ಲಿ ನೋಂದಾಯಿಸಲಾಗಿದೆ. ವಿದ್ಯುದ್ದೀಕರಣಕ್ಕಾಗಿ ರೂ.50,000/-ಗಳಂತೆ ಪ್ರತಿ ಕೊಳವೆಬಾವಿಗಳಿಗೆ ಮುಂಗಡ ಹಣವನ್ನು ಎಸ್ಕಾಂಗಳಿಗೆ ಬಿಡುಗಡೆ ಮಾಡಲಾಗಿದ್ದು, ಎಸ್ಕಾಂಗಳಲ್ಲಿ ವಿದ್ಯುದ್ದೀಕರಣ ಕೆಲಸ ಪ್ರಗತಿಯಲ್ಲಿರುತ್ತದೆ. ಬಾಕಿಯಿರುವ ಕೊಳವೆಬಾವಿಗಳಿಗೆ ತ್ವರಿತವಾಗಿ ವಿದ್ಯುತ್ ಸಂಪರ್ಕ ಕಲ್ಪಿಸಲು ಕ್ರಮವಹಿಸಲಾಗುವುದು. |

| ಕ್ರ.ಸಂ | ವರ್ಷ | ಮಂಜೂರಾದ ಕೊಳವೆಬಾವಿಗಳ ಸಂಖ್ಯೆ | ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ | ಖರ್ಚು |
|---|---|---|---|---|
| 01 | 2019-20 | 9034 | 9034 | - |
| 02 | 2020-21 | 7837 | 7837 | - |

ಸಂಖ್ಯೆ: ಸಕಇ 69 ಆರ್&ಐ 2020

(ಗೋವಿಂದ ಎಂ ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ
ಹಾಗೂ ಸಮಾಜ ಕಲ್ಯಾಣ ಇಲಾಖಾ ಸಚಿವರು